# ವಿಧೇಯಕ ಮಂಡನೆ ಬಗ್ಗೆ ಮೊದಲೇ ತಿಳಿಸಲಾಗಿತ್ತು



ವಿಧಾನಸಭೆ: ಈಗಾಗಲೇ ಹೊರಡಿಸಿರುವ ಸುಗ್ರೀವಾಜ್ಞೆ ಸಂಬಂಧ ವಿಧೇಯಕಗಳು ಹಾಗೂ ಮಹತ್ವದ ವಿಧೇಯಕವಿದ್ದರೆ ಮಂಡಿಸುವುದಾಗಿ ಕಲಾಪ ಸಲಹಾ ಸಮಿತಿ ಯಲ್ಲಿ ಮೊದಲೇ ಸ್ಪಷ್ಟವಾಗಿ ಪ್ರತಿಪಕ್ಷಗಳ ನಾಯಕರಿಗೆ ತಿಳಿಸಲಾ ಗಿತ್ತು. ಸದನಕ್ಕೂ ಮಾಹಿತಿ ನೀಡಲಾಗಿತ್ತು. ಹಾಗಿದ್ದರೂ ಚರ್ಚೆಗೆ ಅವಕಾಶ ನೀಡಿಲ್ಲ ಎಂಬ ಪ್ರತಿಪಕ್ಷ ನಾಯಕರ ಆರೋಪ ಸರಿಯಲ್ಲ ಎಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ಗುರುವಾರ ಬೆಳಗ್ಗೆ ಕಲಾಪ ಆರಂಭವಾಗುತ್ತಿದ್ದಂತೆ ವಿಷಯ ಪ್ರಸ್ತಾಪಿಸಿದ ಅವರು, ಪ್ರತಿಪಕ್ಷ ನಾಯಕರು ಚರ್ಚೆಗೆ ಅವಕಾಶ ನೀಡಿಲ್ಲ ಎಂದು ಆರೋಪಿಸಿರುವ ಹಿನ್ನೆಲೆಯಲ್ಲಿ ಸ್ಪಷ್ಟನೆ ನೀಡುತ್ತಿದ್ದೇನೆ ಎಂದರು. ಸಚಿವ ಆರ್.ಅಶೋಕ್, ವಿಧಾನಸಭಾಧ್ಯಕ್ಷರು ಪ್ರಜಾಸತ್ತಾತ್ಮಕವಾಗಿ ನಡೆದುಕೊಂಡಿದ್ದಾರೆ. ವಿಧೇ ಯಕ ವಿಚಾರ ಪಕ್ಷದ ಪ್ರಣಾಳಿಕೆಯಲ್ಲೂ ಇದೆ. ಈ ಹಿಂದೆ ಕಾಂಗ್ರೆಸ್ ಪಕ್ಷವೇ ರಾಜಕೀಯ ಒತ್ತಡ ತಂದು ವಿಧೇಯಕ ಅನುಮೋದನೆಯಾಗದಂತೆ ನೋಡಿಕೊಂಡಿತ್ತು ಎಂದು ಕಿಡಿ ಕಾರಿದರು.

## ವಿ.ವಿ. ಸಿಂಡಿಕೇಟ್‌ಗಳಲ್ಲಿ ಶಾಸಕರು ಪ್ರತಿನಿಧಿಸಲು ಅವಕಾಶಕ್ಕೆ ಒತ್ತಾಯ

ವಿಧಾನ ಪರಿಷತ್ತು: ವಿಶ್ವವಿದ್ಯಾಲಯಗಳ ಸಿಂಡಿಕೇಟ್‌ನಲ್ಲಿ ವಿಧಾನಸಭೆ ಮತ್ತು ವಿಧಾನ ಪರಿಷತ್ತು ಸದಸ್ಯರೂ ಪ್ರತಿನಿಧಿಸಲು ಅವಕಾಶ ನೀಡಬೇಕು ಎಂಬ ಒತ್ತಾಯ ಕೇಳಿಬಂತು. ಗುರುವಾರ ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್. ಅಶ್ವತ್ಥ ನಾರಾಯಣ್, 'ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಮತ್ತು ಇತರ ಕೆಲವು ಕಾನೂನು (2ನೇ ತಿದ್ದುಪಡಿ) ವಿಧೇಯಕ 2020' ಮಂಡಿಸಿದರು. ವಿಧೇಯಕದ ಮೇಲಿನ ಚರ್ಚೆಯಲ್ಲಿ ಬಹುತೇಕ ಸದಸ್ಯರು ಅವರವರ ಅಭಿಪ್ರಾಯ ವ್ಯಕ್ತಪಡಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಡಾ. ಅಶ್ವತ್ಥ ನಾರಾಯಣ್, ಕರ್ನಾಟಕ ವಿಶ್ವವಿದ್ಯಾಲಯ ಕಾಯ್ದೆಯಲ್ಲಿ ಇದಕ್ಕೆ ಅವಕಾಶ ಇಲ್ಲ. ಕುಲಪತಿ ನೇಮಕಾತಿ ವಿಚಾರದಲ್ಲಿ ಪಾರದರ್ಶಕತೆ ಹಾಗೂ ಗುಣಮಟ್ಟದ ವ್ಯಕ್ತಿಯನ್ನು ನೇಮಕ ಮಾಡಲಾಗುವುದು ಎಂದರು. ರಾಜ್ಯ ವಿಶ್ವವಿದ್ಯಾಲಯ ಕಾಯ್ದೆಗೆ 20 ವರ್ಷ ಆಗಿದೆ. ಸಮಗ್ರ ತಿದ್ದುಪಡಿ ತರುವ ಕೆಲಸ ಮಾಡಲಾಗುವುದು ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು. ನಂತರ ವಿಧೇಯಕ ಅಂಗೀಕಾರಗೊಂಡಿತು.